ವಿಷಯ: ಹುಬ್ಬಳ್ಳಿ ಧಾರವಾಡ ಮಹಾ ನಗರದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವ ಕುರಿತು.

878 (1465)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವ ವಿಚಾರ ಈಗ ಯಾವ ಹಂತದಲ್ಲಿ ಇದೆ?

ಆ) ಸರ್ಕಾರದವರು ಆ ಕುರಿತು ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು ಹಾಗೂ ಕೇಂದ್ರ ಸರ್ಕಾರಕ್ಕೆ ಈ ಬಗ್ಗೆ ಪ್ರಸ್ತಾಪ ಕಳುಹಿಸಲಾಗಿದೆಯೇ?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯ ಮಂತ್ರಿಗಳು):

ಅ) ರಾಜ್ಯ ಸರ್ಕಾರ ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಬಹಳ ಕಾಲದಿಂದಲೂ ಪ್ರಯತ್ನಿಸುತ್ತಿದೆ. ಈ ಸಂಬಂಧದಲ್ಲಿ ಉಚ್ಚ ನ್ಯಾಯಾಲಯದ ಅನುಮತಿಯ ಅಗತ್ಯ ಇದ್ದು ಅವರ ಅನುಮತಿ ಕೋರಿ ಮುಖ್ಯ ಮಂತ್ರಿಗಳು ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರಿಗೆ ಹುಬ್ಬಳ್ಳಿ-ಧಾರವಾಡ ನಗರದಲ್ಲಿ ನ್ಯಾಯಪೀಠ ಸ್ಥಾಪಿಸಲು ಸ್ಥಳವನ್ನು ನೀಡಲು ಹಾಗೂ ನ್ಯಾಯಾಧೀಶರಿಗೆ ಅನೇಕ ಸೌಲಭ್ಯಗಳನ್ನು ಕಲ್ಪಿಸಲು ಸಿದ್ದರಿದ್ದೇವೆ ಎಂಬ ಅಂಶವನ್ನು ಅವರ ಗಮನಕ್ಕೆ ತಂದು ಅವರ ಅನುಮೋದನೆಯನ್ನು ನಿರೀಕ್ಷಿಸಲಾಗುತ್ತಿದೆ. ಉಚ್ಚ ನ್ಯಾಯಾಲಯದ ಅನುಮೋದನೆ ದೊರತ ಕೂಡಲೇ ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

ಆ) ಕೈಗೊಂಡ ಕ್ರಮಗಳ ಬಗ್ಗೆ ಅಂಶ (ಅ)ನಲ್ಲಿ ವಿವರಿಸಲಾಗಿದೆ. ಉಚ್ಚ ನ್ಯಾಯಾಲಯದ ಸಹಮತಿ ದೊರೆತ ನಂತರ ರಾಜ್ಯಪಾಲರ ಒಪ್ಪಿಗೆ ಪಡೆದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲಾಗುವುದು.

ವಿಷಯ: ಧಾರವಾಡ ಜಿಲ್ಲೆಯಲ್ಲಿ ಸೀಮೆಎಣ್ಣೆ ಕೂಪನ್‌ಗಳ ವಿತರಣೆ

879 (1467)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?